# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದೇವರಾಜ ಅರಸ್ ಎಜುಕೇಷನ್ ಸೊಸೈಟಿಯ ಪ್ರಕೃತಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಚಿತ್ರದುರ್ಗ ಇಲ್ಲಿ 2024-25ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಬಿಎಎಂಎಸ್ (BAMS) ಪದವಿ ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡುವ ಕುರಿತು.

**ಓದಲಾಗಿದೆ:**

1. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಬೆಂಗಳೂರು ಇವರ ಪತ್ರ ಸಂಖ್ಯೆ: RGUHS/ACA/AFF/F/ AY-69/2023-24/2024-25, ದಿನಾಂಕ: 12.09.2023.
2. ಭಾರತ ಸರ್ಕಾರದ NCISM, ನವದೆಹಲಿ, ಇವರ ಪತ್ರ ಸಂಖ್ಯೆ:4-184/KA/MARB/2024-Ay, ದಿನಾಂಕ: 10.07.2024.
3. ಆಯುಕ್ತರು, ಆಯುಷ್ ಇಲಾಖೆ ಇವರ ಪತ್ರ ಸಂಖ್ಯೆ:ಆಯುಷ್/22/ವೈ.ಶಿ.(2)/2017-18, ದಿನಾಂಕ:20.07.2024.

* * * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ.(1)ರ ಪತ್ರದಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ದೇವರಾಜ ಅರಸ್ ಎಜುಕೇಷನ್ ಸೊಸೈಟಿಯ ಪ್ರಕೃತಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ,N.H-4, Bypass, ಚಳ್ಳಕೆರೆ ಟೋಲ್‌ಗೇಟ್ ಹತ್ತಿರ, ಚಿತ್ರದುರ್ಗ ಜಿಲ್ಲೆ ಇವರಿಗೆ 2023-24 ಮತ್ತು 2024-25ನೇ ಶೈಕ್ಷಣಿಕ ಸಾಲಿಗೆ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಬಿಎಎಂಎಸ್ (BAMS) ಪದವಿ ಕೋರ್ಸ್‌ನ್ನು ಪ್ರಾರಂಭಿಸಲು ನಮೂನೆ-5 ರಲ್ಲಿ Renewal consent of Affiliation ನೀಡಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(2)ರ ಪತ್ರದಲ್ಲಿ ಭಾರತ ಸರ್ಕಾರದ National Commission for Indian system of Medicine (NCISM), ನವದೆಹಲಿ, ಇವರು ಪ್ರಕೃತಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಚಿತ್ರದುರ್ಗ ಇವರಿಗೆ 2024-25ನೇ ಶೈಕ್ಷಣಿಕ ಸಾಲಿಗೆ ಹೊಸದಾಗಿ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ್ನು 60 ಸೀಟುಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಿಸಲು letter of Permission ನೀಡಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(3)ರ ಪತ್ರದಲ್ಲಿ ಆಯುಕ್ತರು, ಆಯುಷ್ ಇಲಾಖೆ ಇವರು ಭಾರತ ಸರ್ಕಾರದ National Commission for Indian System of Medicine (NCISM), ನವದೆಹಲಿ, ಇವರು ಸದರಿ ಮಹಾವಿದ್ಯಾಲಯಕ್ಕೆ 2024-25ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ್ನು 60 ಸೀಟುಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಿಸಲು letter of Permission ನೀಡಿರುವುದರಿಂದ ದೇವರಾಜ ಅರಸ್ ಎಜುಕೇಷನ್ ಸೊಸೈಟಿಯ, ಪ್ರಕೃತಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, N.H-4, Bypass, ಚಳ್ಳಕೆರೆ ಟೋಲ್ಗೇಟ್ ಹತ್ತಿರ, ಚಿತ್ರದುರ್ಗ ಈ ಸಂಸ್ಥೆಗೆ ಹೊಸದಾಗಿ ಬಿ.ಎ.ಎಂ.ಎಸ್.(BAMS) ಪದವಿ ಕೋರ್ಸ್‌ನ್ನು 60 ಸೀಟುಗಳ ಪ್ರವೇಶ ಮಿತಿಯೊಂದಿಗೆ ಮಹಾವಿದ್ಯಾಲಯವನ್ನು ಪ್ರಾರಂಭಿಸಲು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಕಾಯ್ದೆ 1994 ಕಲಂ 45ರ ಅನುಸಾರ ಸರ್ಕಾರದ ಆದೇಶ ಹೊರಡಿಸಬೇಕೆಂದು ಕೋರಿರುತ್ತಾರೆ.

ಆಯುಕ್ತರು, ಆಯುಷ್ ಇಲಾಖೆ ಇವರ ವರದಿ, ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ದೇವರಾಜ ಅರಸ್ ಎಜುಕೇಷನ್ ಸೊಸೈಟಿಯ ಪ್ರಕೃತಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, N.H-4, Bypass, ಚಳ್ಳಕೆರೆ

...2

ಟೋಲ್‌ಗೇಟ್ ಹತ್ತಿರ, ಚಿತ್ರದುರ್ಗ ಜಿಲ್ಲೆ ಇವರಿಗೆ 2024-25ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಬಿಎಎಂಎಸ್ (BAMS) ಪದವಿ ಕೋರ್ಸ್ ಪ್ರಾರಂಭಿಸಲು ನಿರಾಕ್ಷೇಪಣಾ ಪತ್ರ ನೀಡಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ:ಆಕುಕ 179 ಪಿಐಎಂ 2023,</u>**
**<u>ಬೆಂಗಳೂರು. ದಿನಾಂಕ:13.08.2024</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದೇವರಾಜ ಅರಸ್ ಎಜುಕೇಷನ್ ಸೊಸೈಟಿಯ ಪ್ರಕೃತಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, N.H-4, Bypass, ಚಳ್ಳಕೆರೆ ಟೋಲ್‌ಗೇಟ್ ಹತ್ತಿರ, ಚಿತ್ರದುರ್ಗ ಜಿಲ್ಲೆ ಇವರಿಗೆ 2024-25ನೇ ಶೈಕ್ಷಣಿಕ ಸಾಲಿನಿಂದ 60 (ಅರವತ್ತು) ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಬಿಎಎಂಎಸ್ (BAMS) ಪದವಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ನಿರಾಕ್ಷೇಪಣಾ ಪತ್ರ ನೀಡಿದೆ.

**<u>ಸಂಸ್ಥೆಯು ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು:-</u>**

1. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
2. ಸಂಸ್ಥೆಗೆ ಹೊಂದಿಕೊಂಡಿರುವ ಆಸ್ಪತ್ರೆಯನ್ನು L-4 (Teaching Hospital) ಬೋಧನಾ ಆಸ್ಪತ್ರೆ ಎಂದು ಕರ್ನಾಟಕ ಖಾಸಗಿ ವೈದ್ಯಕೀಯ ಸಂಶೋಧನಾ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನೋಂದಣಿ ಪಡೆದು ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮ/ಆದೇಶಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು ಮತ್ತು ಸರ್ಕಾರಿ ಕೋಟಾ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
4. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
5. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
6. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ, ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
7. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
8. ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಆಯುಕ್ತರು, ಆಯುಷ್ ಇಲಾಖೆ, ಇವರು, ಖಚಿತಪಡಿಸಿಕೊಳ್ಳುವುದು.
9. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಯೋಜನೆ/ಮಂಜೂರಾತಿಯನ್ನುಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

13/8

(ಶ್ರೀಪತಿ ಪಿ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಭಾವೈಪ ಮತ್ತು ಸಮನ್ವಯ)

13/08

**<u>ಇವರಿಗೆ:-</u>**

1. ಆಯುಕ್ತರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು-560 009.
2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಬ್ಲಾಕ್, ಜಯನಗರ, ಬೆಂಗಳೂರು-41.

3. ಪ್ರಾಂಶುಪಾಲರು, ಪ್ರಕೃತಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, N.H-4, Bypass, ಚಳ್ಳಕೆರೆ ಟೋಲ್‌ಗೇಟ್ ಹತ್ತಿರ, ಚಿತ್ರದುರ್ಗ ಜಿಲ್ಲೆ.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ-3, ಇವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.